# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರು ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 702 |
| ಉತ್ತರಿಸಬೇಕಾದ ದಿನಾಂಕ : | 13.12.2024 |
| ಉತ್ತರಿಸುವ ಸಚಿವರು : | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಪ್ರತಿ ವರ್ಷ ಐ.ಎ.ಎಸ್., ಕೆ.ಎ.ಎಸ್., ಬ್ಯಾಂಕಿಂಗ್ ಸೇರಿದಂತೆ ವಿವಿಧ ಹುದ್ದೆಗಳಿಗೆ ನೀಡಲಾಗುತ್ತಿರುವ ಪೂರ್ವಭಾವಿ ಪರೀಕ್ಷೆಯ ಉಚಿತ ತರಬೇತಿಯು ಇತರೆ ಇಲಾಖೆಗಳಿಗಿಂತ ಪ್ರತಿ ಬಾರಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಪ್ರಕ್ರಿಯೆ ಪ್ರತಿ ಬಾರಿ ವಿಳಂಬವಾಗಲು ಕಾರಣವೇನು; ಈ ತರಬೇತಿ ನೀಡಲು ಇಲಾಖೆಯಲ್ಲಿ ಅನುದಾನದ ಕೊರತೆ ಇದೆಯೇ; (ಈ ಕುರಿತು ಸ್ಪಷ್ಟನೆಯನ್ನು ನೀಡುವುದು) | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಐ.ಎ.ಎಸ್, ಕೆ.ಎ.ಎಸ್ ಬ್ಯಾಂಕಿಂಗ್ ಮುಂತಾದ ಪರೀಕ್ಷಾ ಪೂರ್ವ ತರಬೇತಿಗಳಿಗೆ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸುವ ಅಂಕಗಳು ಮತ್ತು ಪ್ರವರ್ಗವಾರು ಮೀಸಲಾತಿ ಆಧರಿಸಿ ಅಭ್ಯರ್ಥಿಗಳನ್ನು ತರಬೇತಿಗೆ ಆಯ್ಕೆ ಮಾಡಲಾಗುತ್ತದೆ. ಪ್ರವೇಶ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಎಲ್ಲಾ ಅಭ್ಯರ್ಥಿಗಳಿಗೆ ಒಟ್ಟಿಗೆ ಪ್ರವೇಶ ಪರೀಕ್ಷೆಯನ್ನು ನಡೆಸಿಕೊಡುತ್ತದೆ. |
| ಆ) | ಕಳೆದ ಎರಡು ವರ್ಷಗಳಲ್ಲಿ ಇಲಾಖೆಯಿಂದ ಈ ಪರೀಕ್ಷೆಗಳನ್ನು ನಡೆಸಿ ತರಬೇತಿಯನ್ನು ನೀಡಲು ಇಲಾಖೆ ಖರ್ಚು ಮಾಡಿರುವ ಅನುದಾನ ಎಷ್ಟು; (ಮಾಹಿತಿ ನೀಡುವುದು) | ಕಳೆದ ಎರಡು ವರ್ಷಗಳಲ್ಲಿ ಇಲಾಖೆಯಿಂದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಪರೀಕ್ಷಾ ಪೂರ್ವ ತರಬೇತಿಗಳನ್ನು ನೀಡಲು ನಿಗದಿಪಡಿಸಿಕೊಂಡಿರುವ ಅನುದಾನದ ವಿವರ ಈ ಕೆಳಗಿನಂತಿದೆ.<br>ಕ್ರ.ಸಂ. / ಆರ್ಥಿಕ ವರ್ಷ / ಅನುದಾನ (ರೂ.ಲಕ್ಷಗಳಲ್ಲಿ)<br>1 / 2022-23 / 500.00<br>2 / 2023-24 / 500.00<br>ಒಟ್ಟು / 1000.00 |
| ಇ) | ಈ ತರಬೇತಿಯನ್ನು ಕೆಲವು ಅಭ್ಯರ್ಥಿಗಳು ದುರುಪಯೋಗ ಪಡಿಸಿಕೊಂಡು ಎರಡೆರಡು ಬಾರಿ ಅವಕಾಶ ಪಡೆಯುತ್ತಿರುವುದರಿಂದ ಉಳಿದ ಅಭ್ಯರ್ಥಿಗಳಿಗೆ ಅನ್ಯಾಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ರೀತಿಯ ದುರುಪಯೋಗವನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಒಬ್ಬ ಅಭ್ಯರ್ಥಿಗೆ ಯಾವುದಾದರೂ ಒಂದು ತರಬೇತಿಯನ್ನು ಮಾತ್ರ ನೀಡಲಾಗುತ್ತದೆ. ಒಮ್ಮೆ ತರಬೇತಿ ಪಡೆದ ಅಭ್ಯರ್ಥಿಗಳನ್ನು ಅವರ ಹತ್ತನೇ ತರಗತಿಯ ನೋಂದಣಿ ಸಂಖ್ಯೆ ಆಧಾರದ ಮೇಲೆ ಆನ್-ಲೈನ್ ಅರ್ಜಿ ಸಲ್ಲಿಸುವ ಹಂತದಲ್ಲಿಯೇ ಬ್ಲಾಕ್ ಮಾಡಲಾಗುವುದರಿಂದ ಈಗಾಗಲೇ ತರಬೇತಿ ಪಡೆದವರು ಪುನಃ ಅರ್ಜಿ ಸಲ್ಲಿಸಲು ಸಾಧ್ಯವಾಗದಂತೆ ಕ್ರಮವಹಿಸಲಾಗಿದೆ. |

ಈ) ಈ ಮೇಲಿನ ಪರೀಕ್ಷೆಗಳಿಗೆ ತರಬೇತಿ ನೀಡುವ ಪ್ರಕ್ರಿಯೆಯ ಕುರಿತು ಸಂಪೂರ್ಣ ವಿವರ ನೀಡುವುದು?

1. ಮೊದಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಐ.ಎ.ಎಸ್, ಬ್ಯಾಂಕಿಂಗ್ ಮುಂತಾದ ಪರೀಕ್ಷಾ ಪೂರ್ವ ತರಬೇತಿಗಳಿಗೆ ಅಭ್ಯರ್ಥಿಗಳಿಂದ ಆನ್-ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗುತ್ತದೆ.
2. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುತ್ತದೆ.
3. ಪ್ರವೇಶ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸುವ ಅಂಕಗಳು ಮತ್ತು ಪ್ರವರ್ಗವಾರು ಮೀಸಲಾತಿ ಆಧರಿಸಿ ಅಭ್ಯರ್ಥಿಗಳನ್ನು ತರಬೇತಿಗೆ ಆಯ್ಕೆ ಮಾಡಲಾಗುತ್ತದೆ.
4. ಐ.ಎ.ಎಸ್. ಪರೀಕ್ಷಾ ಪೂರ್ವ ತರಬೇತಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ 7 ರಿಂದ 9 ತಿಂಗಳುಗಳ ಉಚಿತ ತರಬೇತಿಯನ್ನು ನೀಡಲಾಗುವುದು.
5. ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ 3 ರಿಂದ 4 ತಿಂಗಳುಗಳ ಉಚಿತ ತರಬೇತಿಯನ್ನು ನೀಡಲಾಗುವುದು.
6. ಐ.ಎ.ಎಸ್. ಪರೀಕ್ಷಾ ಪೂರ್ವ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ತರಬೇತಿ ಅವಧಿಯಲ್ಲಿ ಈ ಕೆಳಗಿನಂತೆ ಶಿಷ್ಯವೇತನವನ್ನು ಹಾಜರಾತಿ ಅನ್ವಯ ಪಾವತಿಸಲಾಗುವುದು.

| ಕ್ರ. ಸಂ | ತರಬೇತಿ ಸಂಸ್ಥೆಯ ಸ್ಥಳ | ತಲಾ ಅಭ್ಯರ್ಥಿಗೆ ಪ್ರತಿ ತಿಂಗಳಿಗೆ ನಿಗದಿಪಡಿಸಿರುವ ಶಿಷ್ಯವೇತನ (ರೂ.ಗಳಲ್ಲಿ) |
|---|---|---|
| 1 | ನವದೆಹಲಿ | 10,000/- |
| 2 | ಹೈದರಾಬಾದ್ | 8,000/- |
| 3 | ಕರ್ನಾಟಕ ರಾಜ್ಯದಲ್ಲಿನ ಸಂಸ್ಥೆಗಳು | ತರಬೇತಿ ಸಂಸ್ಥೆ ಇರುವ ಸ್ಥಳಕ್ಕೆ ಸಂಬಂಧಿಸಿದಂತೆ, ಸ್ಥಳೀಯ ಜಿಲ್ಲೆಯ ಅಭ್ಯರ್ಥಿಗಳಿಗೆ ರೂ.4,000/- ಹಾಗೂ ಹೊರ ಜಿಲ್ಲೆಗಳ ಅಭ್ಯರ್ಥಿಗಳಿಗೆ ರೂ.6,000/- |

7. ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ತರಬೇತಿ ಸಂಸ್ಥೆ ಇರುವ ಸ್ಥಳಕ್ಕೆ ಸಂಬಂಧಿಸಿದಂತೆ, ಸ್ಥಳೀಯ ಜಿಲ್ಲೆಯ ಅಭ್ಯರ್ಥಿಗಳಿಗೆ ರೂ.4,000/- ಹಾಗೂ ಹೊರ ಜಿಲ್ಲೆಗಳ ಅಭ್ಯರ್ಥಿಗಳಿಗೆ ರೂ.6,000/- ಗಳಂತೆ ಮಾಸಿಕ ಶಿಷ್ಯವೇತನವನ್ನು ಹಾಜರಾತಿ ಅನ್ವಯ ಪಾವತಿಸಲಾಗುವುದು.

| | | |
|---|---|---|
| | | 8. ತರಬೇತಿ ಪಡೆಯುವ ಅಭ್ಯರ್ಥಿಗಳಿಗೆ ಒಂದು ಸೆಟ್ ಕೋರ್ಸ್ ಮೆಟೀರಿಯಲ್ ಅನ್ನು ಉಚಿತವಾಗಿ ನೀಡಲಾಗುವುದು. |

**ಸಂಖ್ಯೆ**:ಹಿಂವಕ 965 ಬಿಂಎಂಎಸ್ 2024

**( ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು
ಸಂಸ್ಕೃತಿ ಇಲಾಖೆ ಸಚಿವರು